<u>1ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ರಾಮನಗರ</u>

<u>Spl.C.14/2023</u>

ದಿಃ 16.03.2024
(ಸಾಕ್ಷಿಗೆ ಪ್ರಮಾಣವಚನವನ್ನು ಬೋಧಿಸಲಾಯಿತು)

Cw-8 Pw-5

| | | |
|---|---|---|
| ಹೆಸರು | ಃ | ಮೂರ್ತಿ |
| ತಂದೆಯ ಹೆಸರು | ಃ | ಸುಂದರ |
| ವಯಸ್ಸು | ಃ | 33 ವರ್ಷ |
| ಉದ್ಯೋಗ | ಃ | ಗಾರೆ ಕೆಲಸ |
| ವಾಸಸ್ಥಳ | ಃ | ರಾಜೀವ್‌ಗಾಂಧಿಪುರ |

<u>ಮುಖ್ಯ ವಿಚಾರಣೆಃ ಸರ್ಕಾರಿ ಅಭಿಯೋಜಕರಿಂದಃ</u>

1. ಈಗ ಸುಮಾರು 1 ವರ್ಷದ ಹಿಂದೆ ಪೊಲೀಸ್ ಠಾಣೆಯಲ್ಲಿ ಪೊಲೀಸರು ಒಂದು ದಸ್ತಾವೇಜಿನ ಮೇಲೆ ನನ್ನ ಸಹಿಯನ್ನು ಪಡೆದಿರುತ್ತಾರೆ.

2. ಸದರಿ ದಸ್ತಾವೇಜನ್ನು ಈಗ ನೋಡಿ ಗುರುತಿಸುತ್ತಿದ್ದು, ಅದನ್ನು ಈಗಾಗಲೇ ನಿ.ಪಿ.2 ಎಂದು ಗುರುತಿಸಲಾಗಿದ್ದು, ಅದರ ಮೇಲಿರುವ ನನ್ನ ಸಹಿಯನ್ನು ಈಗ ನಿ.ಪಿ.2(ಸಿ) ಎಂದು ಗುರುತಿಸಲಾಯಿತು.

3. ನಿ.ಪಿ.2ರಲ್ಲಿ ಏನು ಬರೆದಿದೆ ಎಂಬುದು ನನಗೆ ಮಾಹಿತಿ ಇರುವುದಿಲ್ಲ.

4. ಪೊಲೀಸರು ನನ್ನ ಸಮಕ್ಷಮದಲ್ಲಿ ಯಾವುದೇ ಸ್ಥಳ ಪಂಚನಾಮೆಯನ್ನು ಮಾಡಿರುವುದಿಲ್ಲ.

5. ಅದೇ ಸಮಯದಲ್ಲಿ ಪೊಲೀಸರು ಎಲ್ಲಿಯೋ ಒಂದು ಕಡೆ ನಿಲ್ಲಿಸಿ ಎರಡು ವರ್ಣರಂಜಿತ ಛಾಯಾಚಿತ್ರಗಳನ್ನು ತೆಗೆಸಿದ್ದು, ಅವುಗಳನ್ನು ಈಗ ನೋಡಿ ಗುರುತಿಸುತ್ತಿದ್ದು, ಅವುಗಳನ್ನು ಈಗಾಗಲೇ ಕ್ರಮವಾಗಿ ನಿ.ಪಿ.3 ಮತ್ತು 4 ಎಂದು ಗುರುತಿಸಿದ್ದು ಇರುತ್ತವೆ.

6. ಪೊಲೀಸರು ನಿ.ಪಿ.3 ಮತ್ತು 4ಗಳನ್ನು ಯಾವ ಕಾರಣಕ್ಕೆ ತೆಗೆಸಿರುತ್ತಾರೆ ಎಂಬುದು ನನಗೆ ಮಾಹಿತಿ ಇರುವುದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅಭಿಯೋಜಕರು ಕೋರಿದ್ದಾರೆ. ಅದರಂತೆ ಸಾಕ್ಷಿಯನ್ನು ಪ್ರತಿಕೂಲ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅಭಿಯೋಜಕರಿಗೆ ಅನುಮತಿ ನೀಡಲಾಗಿದೆ)**

<u>ಪಾಟೀ ಸವಾಲುಃ ಸರ್ಕಾರಿ ಅಭಿಯೋಜಕರಿಂದಃ</u>

7. ಈಗ ನನಗೆ ಓದಿ ಹೇಳಿದ ನಿ.ಪಿ.2ರಂತೆ ದಿಃ06.07.2022ರಂದು ಬೆಳಿಗ್ಗೆ 10.30ರಿಂದ 11.15ರವರೆಗೆ ಚಾಸಾ.1 ಇವಳ ತೋರಿಕೆಯ ಮೇರೆಗೆ ಪೊಲೀಸರು ನನ್ನ ಸಮಕ್ಷಮದಲ್ಲಿ ಒಂದು ಸ್ಥಳ ಪಂಚನಾಮೆ ಮಾಡಿ ಅದರ ಮೇಲೆ ನನ್ನ ಸಹಿಯನ್ನು ಪಡೆದಿರುತ್ತಾರೆ ಎಂದು ಸೂಚಿಸುವುದು ಸರಿಯಲ್ಲ.

8. ಅದೇ ಸಮಯದಲ್ಲಿ ನಿ.ಪಿ.2ಕ್ಕೆ ಸಂಬಂಧಿಸಿದಂತೆಯೇ ಪೊಲೀಸರು ನಿ.ಪಿ.3 ಮತ್ತು 4ರಂತೆ ಎರಡು ವರ್ಣರಂಜಿತ ಛಾಯಾಚಿತ್ರಗಳನ್ನು ತೆಗೆಸಿರುತ್ತಾರೆ ಎಂದು ಸೂಚಿಸುವುದು ಸರಿಯಲ್ಲ.

9. ಈಗ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎನ್ನುವುದು ಸರಿಯಲ್ಲ.

ಪಾಟೀ ಸವಾಲುಃ ಶ್ರೀ. ವಿ.ಎಸ್.ಎಸ್., ವಕೀಲರಿಂದ ಆರೋಪಿಗಳ ಪರವಾಗಿಃ ಏನೂ ಇಲ್ಲವೆಂದು ತಿಳಿಸಿರುತ್ತಾರೆ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿ ಇದೆ ಎಂದು ಸಾಕ್ಷಿ ಒಪ್ಪಿದ್ದಾರೆ

(ಜಿ ಡಿ ಮಹಾವರ್ಕರ್)
1ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು/
ವಿಶೇಷ ನ್ಯಾಯಾಧೀಶರು,
ರಾಮನಗರ.